ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ವಿಜಯಪುರ ಜಿಲ್ಲೆಯ ಕೊಲ್ಹಾರ ಪುನರ್ವಸತಿ ಕೇಂದ್ರದಲ್ಲಿನ ಮೂಲಭೂತ ಸೌಲಭ್ಯಗಳನ್ನು ಅಭಿವೃದ್ಧಿಪಡಿಸಲು ರೂ.50.00ಕೋಟಿಗಳ ಮೊತ್ತದ ಮೂಲಭೂತ ಸೌಲಭ್ಯಗಳ ಕಾಮಗಾರಿಗಳನ್ನು ಕೃಷ್ಣಾ ಭಾಗ್ಯ ಜಲ ನಿಗಮದಿಂದ ಅನುಷ್ಠಾನಗೊಳಿಸಲು ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ:-** ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ಇವರ ಪತ್ರ ಸಂಖ್ಯೆ: ಕೃಭಾಜನಿನಿ/ ವ್ಯನಿ/ತಾಂತ್ರಿಕ-3/ಕೊಲ್ಹಾರ/2018-19/2582 ದಿನಾಂಕ:17/10/2019.

**ಪ್ರಸ್ತಾವನೆ:-**

ಮೇಲೆ ಓದಲಾದ ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ಇವರ ಪತ್ರದಲ್ಲಿ 2019-20ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ, ಕೋಲ್ಹಾರ ಪಟ್ಟಣವನ್ನು ಅಭಿವೃದ್ಧಿಪಡಿಸಲು ರೂ.50.00ಕೋಟಿ ಅನುದಾನವನ್ನು ಮಂಜೂರು ಮಾಡಿ ನಗರಾಭಿವೃದ್ಧಿ ಇಲಾಖೆಗೆ ಒಂದೇ ಕಂತಿನಲ್ಲಿ ಹಸ್ತಾಂತರಿಸುವ ಪ್ರಸ್ತಾವನೆಗೆ ದಿನಾಂಕ:09/07/2019ರಂದು ಜರುಗಿದ ನಿಗಮದ ನಿರ್ದೇಶಕರ ಮಂಡಳಿಯ 121ನೇ ಸಭೆಯಲ್ಲಿ ತೀರುವಳಿ ಪಡೆದಿದ್ದು, ನಿಗಮಕ್ಕೆ 2019-20ನೇ ಸಾಲಿನ ಬಜೆಟ್‌ನಲ್ಲಿ ಒದಗಿಸಿರುವ ಅನುದಾನದಿಂದ ಈ ವೆಚ್ಚವನ್ನು ಭರಿಸಲು ಪ್ರಸ್ತಾವನೆ ಸಲ್ಲಿಸಲಾಗಿದೆ.

ಬಸವನಬಾಗೇವಾಡಿ ಮತಕ್ಷೇತ್ರದ ಶಾಸಕರು ಕೋಲ್ಹಾರ ಪುನರ್ವಸತಿ ಕೇಂದ್ರದಲ್ಲಿನ ಮೂಲಭೂತ ಸೌಲಭ್ಯಗಳನ್ನು ಅಭಿವೃದ್ಧಿಪಡಿಸಲು ರೂ.50.00ಕೋಟಿಗಳ ಅನುದಾನವನ್ನು ನಗರಾಭಿವೃದ್ಧಿ ಇಲಾಖೆಗೆ ಹಸ್ತಾಂತರಿಸುವ ಪ್ರಸ್ತಾವನೆಯನ್ನು ಮಾರ್ಪಡಿಸಿ ಮೂಲಭೂತ ಸೌಲಭ್ಯಗಳ ಕಾಮಗಾರಿಗಳನ್ನು ಕೃಷ್ಣಾ ಭಾಗ್ಯ ಜಲ ನಿಗಮದಿಂದ ಅನುಷ್ಠಾನಗೊಳಿಸುವಂತೆ ಕೋರಿರುತ್ತಾರೆ.

ಮಾನ್ಯ ಶಾಸಕರ ಕೋರಿಕೆಯಂತೆ, ಸದರಿ ಪ್ರಸ್ತಾವನೆಯನ್ನು ದಿನಾಂಕ:20/09/2019ರಂದು ಜರುಗಿದ ನಿಗಮದ ನಿರ್ದೇಶಕರ ಮಂಡಳಿಯ 122ನೇ ಸಭೆಯ ಮುಂದೆ ಮಂಡಿಸಿದ್ದು, ಮಂಡಳಿಯು "ಈಗಾಗಲೇ ಕೊಲ್ಹಾರ ಪುನರ್ವಸತಿ ಕೇಂದ್ರದಲ್ಲಿನ ಮೂಲಭೂತ ಸೌಕರ್ಯಕ್ಕಾಗಿ ಒದಗಿಸಲು ಅವಶ್ಯವಿದ್ದ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ವಿನಿಯೋಗಿಸಲು ಅಂದಾಜಿಸಿರುವ ರೂ.28.76ಕೋಟಿ ಮೊತ್ತವನ್ನು ಹೊರತುಪಡಿಸಿ, 2019-20ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ, ಕೋಲ್ಹಾರ ಪಟ್ಟಣವನ್ನು ಅಭಿವೃದ್ಧಿಪಡಿಸಲು ಅಂದಾಜು ಮೊತ್ತ ರೂ.50.00ಕೋಟಿಗಳ ಒಂದಾವರ್ತಿ ಅನುದಾನವನ್ನು ನಗರಾಭಿವೃದ್ಧಿ ಇಲಾಖೆಗೆ ಒಂದೇ ಕಂತಿನಲ್ಲಿ ಹಸ್ತಾಂತರಿಸುವ ಬದಲು ಕೋಲ್ಹಾರ ಪಟ್ಟಣವನ್ನು ಅಭಿವೃದ್ಧಿಪಡಿಸಲು ಅಂದಾಜು ಮೊತ್ತ 50.00 ಕೋಟಿಗಳ ಕಾಮಗಾರಿಗಳನ್ನು ಕೃಷ್ಣಾ ಭಾಗ್ಯ ಜಲ ನಿಗಮದ ವತಿಯಿಂದ ಅನುಷ್ಠಾನಗೊಳಿಸಲು ಮಂಡಳಿ ಸಭೆಯು ಅನುಮೋದಿಸಿರುತ್ತದೆ ಎಂದು ಮೇಲೆ ಓದಲಾದ ವ್ಯವಸ್ಥಾಪಕ ನಿರ್ದೇಶಕರು ವರದಿ ಮಾಡಿರುತ್ತಾರೆ.

ಮುಂದುವರೆದು, ವ್ಯವಸ್ಥಾಪಕ ನಿರ್ದೇಶಕರು ಕೃಷ್ಣಾ ಭಾಗ್ಯ ಜಲ ನಿಗಮ ರವರು ದಿನಾಂಕ:17/10/2019ರ ಪತ್ರದಲ್ಲಿ ದಿನಾಂಕ:20/09/2019ರಂದು ಜರುಗಿದ 122ನೇ ನಿಗಮದ ನಿರ್ದೇಶಕರ ಮಂಡಳಿ ಸಭೆಯ ತೀರುವಳಿಯಂತೆ ಕೋಲ್ಹಾರ ಪಟ್ಟಣವನ್ನು ಅಭಿವೃದ್ಧಿಪಡಿಸಲು ಅಂದಾಜಿಸಿರುವ ಮೊತ್ತ ರೂ.50.00ಕೋಟಿಗಳ ಕಾಮಗಾರಿಗಳನ್ನು ಕೃಷ್ಣಾ ಭಾಗ್ಯ ಜಲ ನಿಗಮದ ವತಿಯಿಂದ ಅನುಷ್ಠಾನಗೊಳಿಸಲು ಹಾಗೂ ನಿಗಮಕ್ಕೆ 2019-20ನೇ ಸಾಲಿನ ಬಜೆಟ್‌ನಲ್ಲಿ ಒದಗಿಸಿರುವ ಅನುದಾನದಿಂದ ಈ ವೆಚ್ಚವನ್ನು ಭರಿಸಲು ಅಗತ್ಯ ಅನುದಾನವನ್ನು ಪ್ರತ್ಯೇಕವಾಗಿ ಒದಗಿಸಲು ಸೂಕ್ತ ಆದೇಶ ಕೋರಿರುತ್ತಾರೆ.

ಅದರಂತೆ, ಪ್ರಸ್ತಾವನೆಯಲ್ಲಿನ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಜಸಂಇ 75 ಕೆಬಿಎನ್ 2019, ಬೆಂಗಳೂರು, ದಿನಾಂಕ:23/12/2019.**

ವಿಜಯಪುರ ಜಿಲ್ಲೆಯ ಕೋಲ್ಹಾರ ಪುನರ್ವಸತಿ ಕೇಂದ್ರದಲ್ಲಿನ ಮೂಲಭೂತ ಸೌಲಭ್ಯಗಳನ್ನು ಅಭಿವೃದ್ಧಿಪಡಿಸುವ ಕಾಮಗಾರಿಗಳನ್ನು 2019–20ನೇ ಸಾಲಿನ ಆಯವ್ಯಯದಲ್ಲಿ ಘೋಷಣೆಯಾಗಿರುವಂತೆ ರೂ.50.00ಕೋಟಿಗಳಿಗೆ (ರೂಪಾಯಿ ಐವತ್ತು ಕೋಟಿಗಳು ಮಾತ್ರ) ಸೀಮಿತಗೊಳಿಸಿ ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತಕ್ಕೆ 2019–20ನೇ ಸಾಲಿಗೆ ಒದಗಿಸಿದ ಆಯವ್ಯಯದ ಅನುದಾನದಲ್ಲಿಯೇ ಕೃಷ್ಣಾ ಭಾಗ್ಯ ಜಲ ನಿಗಮದ ವತಿಯಿಂದ ಅನುಷ್ಠಾನಗೊಳಿಸುವ ಷರತ್ತಿಗೊಳಪಟ್ಟು ಅನುಮೋದನೆ ನೀಡಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 605 ಆಕೋ–1/2019, ದಿನಾಂಕ:19/11/2019ರಲ್ಲಿ ನೀಡಿರುವ ಸಹಮತಿಯಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಶ್ರೀಹರಿ ಎಸ್.ಆರ್)
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ–5)
ಜಲ ಸಂಪನ್ಮೂಲ ಇಲಾಖೆ

ಪ್ರತಿಯನ್ನು:

1. ಮಹಾಲೇಖಪಾಲರು (ಎ&ಇ)/(ಇ&ಆರ್ಎಸ್ಎ)/(ಜಿ&ಎಸ್ಎಸ್ಎ), ಕರ್ನಾಟಕ, ಬೆಂಗಳೂರು.
2. ಮಾನ್ಯ ಮುಖ್ಯಮಂತ್ರಿಯವರ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
3. ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಜಲ ಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಅಣೆಕಟ್ಟು ವಲಯ, ಆಲಮಟ್ಟಿ.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಜ.ಸಂ.ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.
7. ಸರ್ಕಾರದ ಕಾರ್ಯದರ್ಶಿಗಳು, ಜ.ಸಂ.ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು,
8. ಹೆಚ್ಚುವರಿ ಕಾರ್ಯದರ್ಶಿಗಳು, ಜ.ಸಂ. ಇಲಾಖೆ ಇವರ ಆಪ್ತ ಸಹಾಯಕರು.
9. ಸರ್ಕಾರದ ಉಪ ಕಾರ್ಯದರ್ಶಿಗಳು (ಸಚಿವ ಸಂಪುಟ) ವಿಧಾನ ಸೌಧ, ಬೆಂಗಳೂರು (ಪ್ರಕರಣ ಸಂಖ್ಯೆ: ಸಿ–717/2019ರಂತೆ ಮಾಹಿತಿಗಾಗಿ).
10. ಸರ್ಕಾರದ ಉಪ ಕಾರ್ಯದರ್ಶಿಗಳು, (ಕೃಭಾಜನಿ)/(ಸೇವೆಗಳು) ಜಲ ಸಂಪನ್ಮೂಲ ಇಲಾಖೆ.
11. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋಇ–ಆಕೋ) ವಿಧಾನ ಸೌಧ.
12. ಶಾಖಾ ರಕ್ಷಕ ಕಡತ/ ಹೆಚ್ಚಿನ ಪ್ರತಿಗಳು.